239 (287) – ಶ್ರೀ ನಿಂಗಪ್ಪ ಹೆಚ್. (ಕುಣಿಗಲ್) – ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭೂ ನ್ಯಾಯ ಮಂಡಳಿ, ಬಗರ್ ಹುಕುಂ ಸಾಗುವಳಿ ಸಕ್ರಮ ಸಮಿತಿಗಳನ್ನು ಪುನರ್ ರಚಿಸುವಲ್ಲಿ ಸರ್ಕಾರದ ವಿಳಂಬದಿಂದಾಗಿ, ಗ್ರಾಮೀಣ ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಯಾವ ಅವಧಿಯೊಳಗಾಗಿ ರಾಜ್ಯದ ಎಲ್ಲಾ ಸಮಿತಿಗಳನ್ನು ಪುನರ್ ರಚಿಸಲಾಗುವುದು ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)–

ಅ) ಸರ್ಕಾರದ ಗಮನಕ್ಕೆ ಬಂದಿಲ್ಲ. ಆದಾಗ್ಯೂ ರಾಜ್ಯದ ಎಲ್ಲಾ ತಾಲ್ಲೂಕು ಭೂ ನ್ಯಾಯ ಮಂಡಳಿಗಳಿಗೆ ಅಧಿಕಾರೇತರ ಸದಸ್ಯರನ್ನು ಈಗಾಗಲೇ ನಾಮನಿರ್ದೇಶನ ಮಾಡಲಾಗಿದೆ. ಹೊಸ ಸಮ್ಮಿಶ್ರ ಸರ್ಕಾರ ಅಸ್ಥಿತ್ವಕ್ಕೆ ಬಂದ ಮೇಲೆ ರಾಜ್ಯದಲ್ಲಿ ಒಟ್ಟು 107 ತಾಲ್ಲೂಕು ಭೂ ನ್ಯಾಯ ಮಂಡಳಿಗಳಿಗೆ ಹೊಸ ಅಧಿಕಾರೇತರ ಸದಸ್ಯರನ್ನು ನಾಮನಿರ್ದೇಶನ ಮಾಡಿ ಭೂ ನ್ಯಾಯ ಮಂಡಳಿಗಳನ್ನು ಪುನರ್ ರಚಿಸಲಾಗಿದೆ.

ಮತ್ತು 100 ತಾಲ್ಲೂಕುಗಳಿಗೆ ಬಗರ್ ಹುಕುಮ್ ಸಾಗುವಳಿ ಸಕ್ರಮೀಕರಣ ಸಮಿತಿಗಳನ್ನು ಈಗಾಗಲೇ ರಚಿಸಿ ಆದೇಶಗಳನ್ನು ಹೊರಡಿಸಿದೆ.

ಆ) ರಾಜ್ಯದಲ್ಲಿ ಒಟ್ಟು 189 ಭೂ ನ್ಯಾಯ ಮಂಡಳಿಗಳು ಅಸ್ತಿತ್ವದಲ್ಲಿದ್ದು ಅವುಗಳಲ್ಲಿ 107 ಭೂ ನ್ಯಾಯ ಮಂಡಳಿಗೆ ಹೊಸ ಅಧಿಕಾರೇತರ ಸದಸ್ಯರನ್ನು ನಾಮನಿರ್ದೇಶನ ಮಾಡಿ ಭೂ ನ್ಯಾಯ ಮಂಡಳಿಗಳನ್ನು ಪುನರ್ ರಚಿಸಲಾಗಿದೆ. ಉಳಿದ ಭೂ ನ್ಯಾಯ ಮಂಡಳಿಗೆ ಹೊಸ ಸದಸ್ಯರನ್ನು ನಾಮನಿರ್ದೇಶನ ಮಾಡುವವರೆಗೆ ಹಿಂದಿನ ಸದಸ್ಯರೆ ಮುಂದುವರಿಯುತ್ತಾರೆ.

ಉಳಿದ ತಾಲ್ಲೂಕುಗಳ ಬಗರ್ ಹುಕುಮ್ ಸಾಗುವಳಿ ಸಕ್ರಮೀಕರಣ ಸಮಿತಿಗಳನ್ನು ರಚಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

240 (288) – ಶ್ರೀ ನಿಂಗಪ್ಪ ಹೆಚ್. (ಕುಣಿಗಲ್) – ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಂಜುಂಡಪ್ಪ ವರದಿ ಆಧಾರದ ಮೇರೆಗೆ ತೀರಾ ಹಿಂದುಳಿದ ತಾಲ್ಲೂಕುಗಳ ಪೈಕಿ ಕುಣಿಗಲ್ ತಾಲ್ಲೂಕು ಸಹ ಒಂದಾಗಿರುವುದರಿಂದ ಇಲ್ಲಿ